ಊ) ಆದ್ಯತೆಯ ಮೇಲೆ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ತೋಡಲು ಕ್ರಮ ಕೈಗೊಳ್ಳಲಾಗುವುದೇ ಹಾಗೂ ಎಷ್ಟು ಹಣ ಬೇಕಾಗುವುದು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) : -

ಅ) ರಾಜ್ಯದ ಹಲವಾರು ಸರ್ಕಾರಿ ಪ್ರಾಥಮಿಕ ಹಾಗೂ ಮಾಧ್ಯಮಿಕ ಶಾಲೆಗಳಲ್ಲಿ ಕುಡಿಯುವ ನೀರಿನ ಸೌಲಭ್ಯವಿಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ವಿದ್ಯಾರ್ಥಿಗಳಿಗೆ ಅವರ ಶಾಲೆಯ ಸಮೀಪದಲ್ಲಿ ಲಭ್ಯವಿರುವ ಮೂಲಗಳಿಂದ ಶುದ್ಧ ನೀರನ್ನು ಒದಗಿಸಲಾಗುತ್ತಿದೆ. ೧೯೯೫-೯೬ ರಿಂದ ೨೦೦೦-೦೧ ರವರೆಗೂ ರಾಜ್ಯ ವಲಯ ಯೋಜನೆಯಡಿಯಲ್ಲಿ ಹಂತಹಂತವಾಗಿ ೧೨೦೭ ಶಾಲೆಗಳಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲಾಗಿದೆ.

ಇ) ಎಲ್ಲಾ ಶಾಲೆಗಳಲ್ಲಿ ಕೊಳವೆ ಬಾವಿ ತೋಡಿಸುವುದು ಕಾರ್ಯಸಾಧ್ಯವಿಲ್ಲ. ಆದರೂ ರಾಜ್ಯದ ಆರ್ಥಿಕ ಸ್ಥಿತಿ ಆಧರಿಸಿ ಹಂತಹಂತವಾಗಿ ಕುಡಿಯುವ ನೀರಿನ ಕೊರತೆ ಇರುವ ಶಾಲೆಗಳಿಗೆ ನೀರಿನ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು.

ಈ) ನೀರಿನ ವ್ಯವಸ್ಥೆ ಇರುವ ಶಾಲೆಗಳ ಸಂಖ್ಯೆ : ೧೮೭೭ ತಾಲ್ಲೂಕುವಾರು ಮಾಹಿತಿ ನೀರಿನ ವ್ಯವಸ್ಥೆ ಇಲ್ಲದಿರುವ ಶಾಲೆಗಳ ಸಂಖ್ಯೆ : ೧೦೪೨ ಅನುಬಂಧ - ೧ ರಲ್ಲಿ ಲಗತ್ತಿಸಿದೆ.

ಊ)	ತಾ: ಬೈಲಹೊಂಗಲ	ಸವದತ್ತಿ
ನೀರಿನ ವ್ಯವಸ್ಥೆ ಇರುವ ಶಾಲೆಗಳ ಸಂಖ್ಯೆ	೧೨೨	೧೬೧
ನೀರಿನ ವ್ಯವಸ್ಥೆ ಇಲ್ಲದಿರುವ ಶಾಲೆಗಳ ಸಂಖ್ಯೆ	೯೧	೪೭

ಊ) ಸದ್ಯಕ್ಕೆ ಈ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. ಅಂದಾಜು ರೂ. ೭೦.೦೦ ಲಕ್ಷ ಹಣ ಬೇಕಾಗುತ್ತದೆ.

ಬೈಲಹೊಂಗಲ ತಾಲ್ಲೂಕಿನ ನೇಸರಗಿ ಗ್ರಾಮದಲ್ಲಿ ಹೆರಿಗೆ ಆಸ್ಪತ್ರೆಯ ಕಟ್ಟಡ ಕಟ್ಟಿಸುವುದು

2563 (2961) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : - ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬೆಳಗಾವಿ ಜಿಲ್ಲೆ, ಬೈಲಹೊಂಗಲ ತಾಲ್ಲೂಕಿನ ನೇಸರಗಿ ಗ್ರಾಮದಲ್ಲಿ ಹೆರಿಗೆ ಆಸ್ಪತ್ರೆಯ ಕಟ್ಟಡವನ್ನು ಎಷ್ಟು ವರ್ಷಗಳ ಹಿಂದೆ ಕಟ್ಟಲಾಗಿತ್ತು;

ಆ) ಈ ಆಸ್ಪತ್ರೆಯಲ್ಲಿ ಪ್ರತಿ ತಿಂಗಳು ಸರಾಸರಿ ಎಷ್ಟು ಹೆರಿಗೆಗಳು ಆಗುತ್ತಿವೆ;

ಇ) ಈ ಆಸ್ಪತ್ರೆಯ ಕಟ್ಟಡವು ಬಹಳ ಹಳೆಯದಾಗಿದ್ದು ಅದನ್ನು ಕೆಡವಿ ಅದೇ ಸ್ಥಳದಲ್ಲಿ ಹೊಸ ಕಟ್ಟಡ ಕಟ್ಟಲು ಮುಖ್ಯ ವಾಸ್ತುಶಿಲ್ಪಿಗಳ ಪ್ರಕಾರ ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗದವರು ನೀಲಿ ನಕ್ಷೆಯನ್ನು ತಯಾರಿಸಿದ್ದು ಈಗ ಆ ಕಟ್ಟಡದ ಮಂಜೂರಾತಿ ಮಾಡುವ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ;

ಈ) ಈ ಕೆಲಸಕ್ಕೆ ಎಷ್ಟು ವೆಚ್ಚ ತಗಲುವುದು. ಇದಕ್ಕೆ ಯಾವ ರೀತಿಯಾಗಿ ಹಣಕಾಸಿನ ವ್ಯವಸ್ಥೆಯನ್ನು ಮಾಡಲಾಗಿದೆ.

ಉ) ಈ ಕೆಲಸಕ್ಕೆ ಸುಮಾರು 90 ಲಕ್ಷ ರೂಪಾಯಿಗಳು ಬೇಕಾಗುತ್ತಿದ್ದು ಅದು ಜಿಲ್ಲಾ ಪಂಚಾಯಿತಿಯಿಂದ ಒದಗಿಸಲು ಸಾಧ್ಯವಾಗದೇ ಇರುವುದರಿಂದ ಈ ಕೆಲಸವನ್ನು ರಾಜ್ಯದ ಬೇರೆ ಯಾವುದೇ ಯೋಜನೆ ಅಡಿಯಲ್ಲಿ ತೆಗೆದುಕೊಂಡು ಕಟ್ಟಡದ ಕೆಲಸವನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಸುಮಾರು 50 ವರ್ಷಗಳ ಹಿಂದೆ ಕಟ್ಟಲಾಗಿರುತ್ತದೆ

ಆ) 32

ಇ) ಜಿಲ್ಲಾ ಪಂಚಾಯತ್‌ನಿಂದ ಪ್ರಸ್ತಾವನೆ ಬಂದಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಹಣದ ಕೊರತೆಯಿಂದ ಸದ್ಯದಲ್ಲಿ ಸಾಧ್ಯವಾಗುವುದಿಲ್ಲ.

ಬೆಳಗಾಂ ಜಿಲ್ಲೆಯಲ್ಲಿನ ಗ್ರಾಮೀಣ ಪ್ರದೇಶಗಳಲ್ಲಿ ಶೌಚಾಲಯಗಳ ನಿರ್ಮಾಣ

2564(2962) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) :— ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.